## ಕರ್ನಾಟಕ ಸರ್ಕಾರದ ನಡವಳಿಗಳು.

**ವಿಷಯ:-** ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಅನುಪಾಲನಾ ವರದಿ ಸಲ್ಲಿಸುವಲ್ಲಿ ಕರ್ತವ್ಯಲೋಪವೆಸಗಿರುವ ತುಮಕೂರು ಜಿಲ್ಲೆಯ ಕಾರ್ಯಕ್ರಮ ಅಧಿಕಾರಿಗಳ ವಿರುದ್ಧದ ಶಿಸ್ತು ಕ್ರಮ – **ಅಂತಿಮ** ಆದೇಶ.

**ಓದಲಾಗಿದೆ:** 1. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಇವರ ಅನಧಿಕೃತ ಟಿಪ್ಪಣಿ ಸಂಖ್ಯೆ: ಗ್ರಾಅಪ 483 ಉಖಾಯೋ 2014 ದಿನಾಂಕ: 29-10-2014.

2. ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 270 ವಿಸೇಜಿ 2014. ದಿ:01-12-2014.

3.ಆಪಾದಿತರು ಸಲ್ಲಿಸಿರುವ ಲಿಖಿತ ಹೇಳಿಕೆಗಳು.

4. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಇವರ ಅನಧಿಕೃತ ಟಿಪ್ಪಣಿ ಸಂಖ್ಯೆ: ಗ್ರಾಅಪ 483(2) ಉಖಾಯೋ 2014 ದಿನಾಂಕ: 02-03-2016.

------

**ಪ್ರಸ್ತಾವನೆ:-**

ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯು ಭಾರತ ಸರ್ಕಾರದ ಮಹಾತ್ವಾಕಾಂಕ್ಷೆಯ ಯೋಜನೆಯಾಗಿದ್ದು, ರಾಜ್ಯದಲ್ಲಿ ಈ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಶಾಸನಬದ್ಧ ಕಾರ್ಯಕ್ರಮದ ಅಧಿಕಾರಿಗಳಾಗಿ ಕಾರ್ಯನಿರ್ವಹಿಸುತ್ತಿದ್ದು, ಸದರಿ ಯೋಜನೆಯ ಸಮಗ್ರ ಅನುಷ್ಠಾನಕ್ಕಾಗಿ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯವು ದಿನಾಂಕ 24-08-2013, 03-09,2013, 14-01-2013, 11-11-2013 ಮತ್ತು 25-08-2014 ರಂದು 5 ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. ಸದರಿ ಮಾರ್ಗಸೂಚಿಗಳನ್ವಯ ಕಾರ್ಯನಿರ್ವಹಿಸಿರುವ ಕುರಿತು ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಇವರು ದಿನಾಂಕ 21-01-2014 ರಂದು ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪರಿಶೀಲಿಸಿದಾಗ, ಈ ಕೆಳಕಂಡ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಅವರುಗಳ ಕಾರ್ಯ ವೈಖರಿಯ ಬಗ್ಗೆ ಸಭೆಗೆ ಒದಗಿಸಲಾದ ಮಾಹಿತಿಯು ಅಪೂರ್ಣವಾಗಿದ್ದು, ಮಾರ್ಗಸೂಚಿಗಳನ್ನು ಪಲಿಸುವಲ್ಲಿ ವಿಫಲರಾಗಿರುವುದಾಗಿ ಅವರುಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ದಿನಾಂಕ 29-10-2014 ರ ಅನಧಿಕೃತ ಟಿಪ್ಪಣಿಯೊಂದಿಗೆ ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿರುತ್ತಾರೆ.

1. ಶ್ರೀ ಹೆಚ್.ಡಿ. ಮಹಾಲಿಂಗಯ್ಯ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಮಧುಗಿರಿ, ತುಮಕೂರು ಜಿಲ್ಲೆ.
2. ಶ್ರೀ ವೀರಭದ್ರಗುಪ್ತ, ಸಹಾಯಕ ನಿರ್ದೇಶಕರು, ಮತ್ತು ಪ್ರಭಾರ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಕೊರಟಗೆರೆ, ತುಮಕೂರು ಜಿಲ್ಲೆ.
3. ಶ್ರೀ ಸಿದ್ದಪ್ಪ ಟಿ. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಪಾವಗಡ ತುಮಕೂರು ಜಿಲ್ಲೆ.
4. ಶ್ರೀ ವೆಂಕಟಸ್ವಾಮಿ ಶೆಟ್ಟಿ, ಪಿ.ಎ. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ತುರುವೇಕೆರೆ, ತುಮಕೂರು ಜಿಲ್ಲೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ನರೇಗಾ ಯೋಜನೆಯ ಅನುಷ್ಠಾನದ ಕುರಿತು ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯದ ಸುತ್ತೋಲೆ ಮತ್ತು ಮಾರ್ಗಸೂಚಿಗಳಲ್ಲಿ ಸೂಚಿಸಿರುವ ನಮೂನೆಗಳಲ್ಲಿ ಮಾಹಿತಿಗಳನ್ನು ಸಲ್ಲಿಸದೇ ಹಾಗೂ ಮೇಲಾಧಿಕಾರಿಗಳ ಸೂಚನೆಗಳನ್ನು ಪಾಲಿಸದೇ ಕರ್ತವ್ಯಲೋಪವೆಸಗಿರುವ ಮೇಲ್ಕಂಡ ಅಧಿಕಾರಿಗಳಿಗೆ ಕರ್ನಾಟಕ ನಾಗರೀಕ ಸೇವಾ ವ.ನಿ.ಮೇ. ನಿಯಮ 12(1) (ಎ) ರಡಿ ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾ ಪಟ್ಟಿಯನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ದಿನಾಂಕ 01-12-2014 ರಂದು ಜಾರಿಗೊಳಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಸದರಿ ಕಾರಣ ಕೇಳುವ ನೋಟೀಸಿಗೆ ಆಪಾದಿತ 4 ಅಧಿಕಾರಿಗಳು ತಮ್ಮ ಲಿಖಿತ ಹೇಳಿಕೆಯನ್ನು ಸಲ್ಲಿಸಿ, ಅವರುಗಳ ವಿರುದ್ಧ ಮಾಡಲಾಗಿರುವ ಆರೋಪಗಳಿಗೆ ಸೀಮಿತವಾಗಿ ಪ್ರತಿ ತಿಂಗಳು ಪ್ರಗತಿ ಪರಿಶೀಲನಾ ಸಭೆಗಳನ್ನು ನಡೆಸಿದ್ದು, ನಿಗಧಿತ ನಮೂನೆಯಲ್ಲಿ ಮಾಹಿತಿಗಳನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ಒದಗಿಸಿರುವುದರಿಂದ ಅವರುಗಳ ವಿರುದ್ಧದ ಶಿಸ್ತುಕ್ರಮವನ್ನು ಕೈಬಿಡುವಂತೆ ಕೋರಿರುತ್ತಾರೆ.

ಆಪಾದಿತರ ವಿರುದ್ಧದ ಆರೋಪಗಳು ಮತ್ತು ಆಪಾದಿತರು ಸಲ್ಲಿಸಿರುವ ಲಿಖಿತ ರಕ್ಷಣೆ ಹೇಳಿಕೆಗಳ ಬಗ್ಗೆ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ ಇವರ ಅಭಿಪ್ರಾಯವನ್ನು ಕೋರಲಾಗಿ ಅವರು ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ದಿನಾಂಕ 02-03-2016 ರ ಅನಧಿಕೃತ ಟಿಪ್ಪಣಿಯಲ್ಲಿ

ತುಮಕೂರು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿರವರು ದಿನಾಂಕ 16-02-2016 ರ ಪತ್ರದಲ್ಲಿ ಆಪಾದಿತರು ಸಲ್ಲಿಸಿರುವ ಲಿಖಿತ ರಕ್ಷಣಾ ಹೇಳಿಕೆಗಳನ್ನು ಒಪ್ಪಬಾರದೆಂದು ತಿಳಿಸುತ್ತಾ ಸದರಿ ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲು ಕ್ರಮವಹಿಸುವಂತೆ ಕೋರಿದ್ದು, ಅದರಂತೆ ಅವರುಗಳ ವಿರುದ್ಧ ಶಿಸ್ತುಕ್ರಮ ಜರುಗಿಸಲು ಕೋರಿರುತ್ತಾರೆ.

ಆಪಾದಿತರ ವಿರುದ್ಧದ ಆರೋಪಗಳು ಮತ್ತು ಆಪಾದಿತರು ಸಲ್ಲಿಸಿರುವ ಲಿಖಿತ ರಕ್ಷಣೆ ಹೇಳಿಕೆಗಳ ಬಗ್ಗೆ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ ಇವರ ಅಭಿಪ್ರಾಯವನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿದಾಗ ಆಪಾದಿತ ಅಧಿಕಾರಿಗಳು ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಸುತ್ತೋಲೆ ಮತ್ತು ಮಾರ್ಗಸೂಚಿಗಳಲ್ಲಿ ಸೂಚಿಸಿರುವ ನಮೂನೆಗಳಲ್ಲಿ ಮಾಹಿತಿಗಳನ್ನು ಸಲ್ಲಿಸದೇ ಹಾಗೂ ಮೇಲಾಧಿಕಾರಿಗಳ ಸೂಚನೆಗಳನ್ನು ಪಾಲಿಸದೇ ಕರ್ತವ್ಯಲೋಪವೆಸಗಿರುವುದು ದೃಢಪಟ್ಟಿರುವುದರಿಂದ, ಸದರಿ ಅಧಿಕಾರಿಗಳ ಕರ್ತವ್ಯ ಲೋಪಕ್ಕೆ ಅನುಗುಣವಾಗಿ ದಂಡನೆಯನ್ನು ವಿಧಿಸಲು, ಮತ್ತು ಆಪಾದಿತ ಅಧಿಕಾರಿಗಳ ಪೈಕಿ ಶ್ರೀ ಪಿ. ಎ. ವೆಂಕಟಸ್ವಾಮಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು, ಪಂಚಾಯತಿ, ತುರುವೇಕೆರೆ. ಇವರು ಈಗಾಗಲೇ ದಿನಾಂಕ 31-12-2014 ರಂದು ವಯೋನಿವೃತ್ತಿ ಹೊಂದಿರುವುದರಿಂದ ಹಾಗೂ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ ತುರುವೇಕೆರೆ ಇಲ್ಲಿ ಆ ಅವಧಿಯಲ್ಲಿ ಕರ್ತವ್ಯ ನಿರ್ವಹಿಸದೆ ಇರುವುದರಿಂದ ಇವರ ಲಿಖಿತ ಹೇಳಿಕೆಯನ್ನು ಒಪ್ಪಿ ಇವರುಗಳ ವಿರುದ್ಧದ ಆರೋಪವನ್ನು ಕೈಬಿಡಲು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 270 ವಿಸೇಬಿ 2014 ಬೆಂಗಳೂರು ದಿನಾಂಕ:20-06-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಸರ್ಕಾರವು ಈ ಕೆಳಕಂಡ ಅಧಿಕಾರಿಗಳಿಗೆ ಕ್ರಮಾಂಕ ಗ್ರಾಅಪ 270 ವಿಸೇಬಿ 2014, ದಿ:01-12-2014 ರ ಕಾರಣ ಕೇಳುವ ನೋಟೀಸಿನ ಜೊತೆ ಜಾರಿ ಮಾಡಿರುವ ಆರೋಪಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 8(iii) ರಡಿ ಪ್ರದತ್ತವಾದ ಅಧಿಕಾರದನ್ವಯ " ಒಂದು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಪರಿಣಾಮ ಹೊಂದದಂತೆ (Without Cumulative Effective) ತಡೆಹಿಡಿಯುವ ದಂಡನೆ" ವಿಧಿಸಿ, ಆದೇಶಿಸಿದೆ.

1. ಶ್ರೀ ಹೆಚ್.ಡಿ. ಮಹಾಲಿಂಗಯ್ಯ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಮಧುಗಿರಿ, ತುಮಕೂರು ಜಿಲ್ಲೆ.
2. ಶ್ರೀ ವೀರಭದ್ರಗುಪ್ತ, ಸಹಾಯಕ ನಿರ್ದೇಶಕರು, ಮತ್ತು ಪ್ರಭಾರ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಕೊರಟಗೆರೆ, ತುಮಕೂರು ಜಿಲ್ಲೆ.
3. ಶ್ರೀ ಸಿದ್ದಪ್ಪ ಟಿ. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಪಾವಗಡ ತುಮಕೂರು ಜಿಲ್ಲೆ.

ಮುಂದುವರೆದು, ಶ್ರೀ ವೆಂಕಟಸ್ವಾಮಿ ಶೆಟ್ಟಿ, ಪಿ.ಎ. ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ತುರುವೇಕೆರೆ, ತುಮಕೂರು ಜಿಲ್ಲೆ.ಇವರಿಗೆ ಕ್ರಮಾಂಕ ಗ್ರಾಅಪ 270 ವಿಸೇಬಿ 2014, ದಿ:01-12-2014 ರ ಕಾರಣ ಕೇಳುವ ನೋಟೀಸಿನ ಜೊತೆ ಜಾರಿ ಮಾಡಿರುವ ಆರೋಪಗಳಿಗೆ ಸಂಬಂಧಿಸಿದಂತೆ, ದೋಷಮುಕ್ತಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

20/6/2016
(ಎಸ್. ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ,(ಸೇ-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, (ಎ&ಇ) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು.
4. ಸಂಬಂಧಿಸಿದ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಇವರ ಮುಖಾಂತರ).

ಪ್ರತಿಯನ್ನು ಮಾಹಿತಿಗಾಗಿ:

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2) ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

GO